# 2 ನೇ ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು.

**ಓ ಎಸ್ ನಂ.568-2017 ಪಿ . ಡಬ್ಲುಃ 1**

| | |
|---|---|
| ಸಾಕ್ಷಿದಾರರ ಹೆಸರು<br>ವಾಸ್ತವ್ಯ | ಯು.ಎನ್.ರಾಘವೇಂದ್ರರಾವ್<br>ನಂಜನಗೂಡು |
| | **ಸತ್ಯ ಪ್ರತಿಜ್ಞೆಯ** ಮೇರೆಗೆ **ದಿನಾಂಕ** 18-11-2022. |

**ಮುಂದುವರೆದ ಪಾಟೀ ಸವಾಲುಃ 2 ನೇ ಪ್ರತಿವಾದಿ ಪರ ಶ್ರೀ ಎಸ್.ಯು ವಕೀಲರಿಂದಃ**

ನಾನು ಪ್ರತಿವಾದಿಗೆ ಸಾಲ ನೀಡಿದೆ ಎಂದು ಹೇಳುವ ದಿನದಂದು ನನ್ನ ಬಳಿ ಹಣ ಇತ್ತು ಎಂದು ತೋರಿಸಲು ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ನಾನು ವ್ಯವಸಾಯಗಾರ. ನಾನು 2014 ರಲ್ಲಿ ಚಿಲ್ಲರೆ ಅಂಗಡಿಯನ್ನು ನಡೆಸುತ್ತಿದ್ದೆನು. 1 ಮತ್ತು 2 ನೇ ಪ್ರತಿವಾದಿಗಳು ಸಂಬಂಧಿಕಾರು ಮತ್ತು ಒಂದೇ ಕುಟುಂಬದವರು ಅಲ್ಲಾ ಎಂದರೆ ನನಗೆ ಗೊತ್ತಿಲ್ಲ. ಸಾಕ್ಷಿ ಮುಂದುವರೆದು 1 ನೇ ಪ್ರತಿವಾದಿಯು ನನಗೆ 2 ನೇ ಪ್ರತಿವಾದಿಯನ್ನು ಪರಿಚಯಮಾಡಿಕೊಟ್ಟಿರುತ್ತಾರೆ ಎಂದು ನುಡಿಯುತ್ತಾರೆ. ಪ್ರತಿವಾದಿಗಳು ನನಗೆ ಪ್ರನೋಟ್ ಅನ್ನು ಬರೆದುಕೊಟ್ಟು ತಲಾ ರೂ.50,000/- ಗಳನ್ನು ನನ್ನಿಂದ ಪಡೆದಿರುತ್ತಾರೆ. ಪ್ರತಿವಾದಿಗಳಿಬ್ಬರು ನಾವು ಒಬ್ಬರಿಗೊಬ್ಬರು ಹೊಂದಾಣಿಕೆಯಿಂದ ವ್ಯವಹಾರ ಮಾಡಿಕೊಳ್ಳುತ್ತೇವೆ ಎಂದು ತಿಳಿಸಿದ್ದರಿಂದ ನಾನು ಪ್ರತಿವಾದಿಳಿಂದ ಪ್ರತ್ಯೇಕ ಪ್ರತ್ಯೇಕ ಪ್ರನೋಟ್ ಅನ್ನು ಪಡೆದಿರುವುದಿಲ್ಲ ಎಂದು ನುಡಿಯುತ್ತಾರೆ. 2 ನೇ ಪ್ರತಿವಾದಿ ನನಗೆ ಪರಿಚಿತರಲ್ಲ, ನನ್ನ ಮತ್ತು ಅವರ ನಡುವೆ ಯಾವುದೇ ವ್ಯವಹಾರ ನಡೆದಿರುವುದಿಲ್ಲ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿಯು ನಾನು ಹೇಳುವಂತೆ ದಿ.24-11-2014 ರಂದು ನನ್ನನ್ನು ಭೇಟಿ ಆಗಿರುವುದಿಲ್ಲ, ನನ್ನಿಂದ ಯಾವುದೇ ಸಾಲವನ್ನು ಪಡೆದಿರುವುದಿಲ್ಲ ಮತ್ತು ನನಗೆ ನಿಪಿ-1 ರಂತೆ ಯಾವುದೇ ದಾಖಲೆಯನ್ನು ಬರೆದುಕೊಟ್ಟಿರುವುದಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/-**

**ಕಿ.ಪ್ರ.ದ. ನ್ಯಾ ದಂ. ನಂಜನಗೂಡು**